# ಕರ್ನಾಟಕ ಪರೀಕ್ಷಾ ಪ್ರಾಧಿಕಾರ
# Karnataka Examinations Authority

ಸಂಖ್ಯೆ : ಇಡಿ/ಕೆಇಎ/ನೇ.ವಿ/13/2026 ದಿನಾಂಕ: 17.09.2026

**ಪೊಲೀಸ್ ಇಲಾಖೆಯಿಂದ ಅಧಿಸೂಚಿಸಲಾದ ಉಳಿಕೆ ಮೂಲ ವೃಂದ ಹಾಗೂ ಕಲ್ಯಾಣ ಕರ್ನಾಟಕ ವೃಂದದ ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ (CAR/DAR) ಹುದ್ದೆಗಳಿಗೆ ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಯ ಜಿಲ್ಲಾ/ಘಟಕವಾರು ತಾತ್ಕಾಲಿಕ ಅಂಕ ಪಟ್ಟಿ ಪ್ರಕಟಿಸಿರುವ ಬಗ್ಗೆ.**

ಅಧಿಸೂಚನೆ ಸಂಖ್ಯೆ: 04/ನೇಮಕಾತಿ-5(ಎ)/2026-27(ಆರ್.ಪಿ.ಸಿ) ದಿನಾಂಕ: 19.06.2026
ಅಧಿಸೂಚನೆ ಸಂಖ್ಯೆ: 04/ನೇಮಕಾತಿ-5(ಬಿ)/2026-27(ಕೆ.ಕೆ) ದಿನಾಂಕ: 19.06.2026

*****

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ, ಪೊಲೀಸ್ ಇಲಾಖೆಯ ಉಳಿಕೆ ಮೂಲ ವೃಂದ ಹಾಗೂ ಕಲ್ಯಾಣ ಕರ್ನಾಟಕ ವೃಂದದ ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳ ನೇಮಕಾತಿ ಸಂಬಂಧ ದಿನಾಂಕ 06.09.2026 ರಂದು ನಡೆಸಿದ ಸ್ಪರ್ಧಾತ್ಮಕ ಪರೀಕ್ಷೆಯ ಕೀ ಉತ್ತರಗಳನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ದಿನಾಂಕ 07.09.2026 ರಂದು ಪ್ರಕಟಿಸಿ, ಸದರಿ ಪ್ರಕಟಿತ ಕೀ ಉತ್ತರಗಳಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ದಿನಾಂಕ 09.09.2026 ಬೆಳಿಗ್ಗೆ 10.30 ರವರೆಗೆ ಕಾಲಾವಕಾಶ ನೀಡಲಾಗಿತ್ತು.

ಈ ಸಂಬಂಧ ಪ್ರಾಧಿಕಾರದಲ್ಲಿ ಸ್ವೀಕೃತವಾದ ಆಕ್ಷೇಪಣೆಗಳನ್ನು ವಿಷಯ ತಜ್ಞರ ಸಮಿತಿಗಳ ಮೂಲಕ ಪರಿಶೀಲಿಸಿ, ಪರಿಷ್ಕೃತ ಕೀ ಉತ್ತರಗಳನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ದಿನಾಂಕ 10.09.2026 ರಂದು ಪ್ರಕಟಿಸಲಾಗಿರುತ್ತದೆ.

ಅದರಂತೆ ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ತಾತ್ಕಾಲಿಕ ಫಲಿತಾಂಶವನ್ನು ದಿನಾಂಕ 11.09.2026 ರಂದು ಪ್ರಕಟಿಸಿ ದಿನಾಂಕ 14.09.2026 ಸಂಜೆ 05.30 ರೊಳಗೆ ಆಕ್ಷೇಪಣೆ ಸಲ್ಲಿಸಲು ಕಾಲಾವಕಾಶ ನೀಡಲಾಗಿತ್ತು.

ಪ್ರಕಟಿತ ತಾತ್ಕಾಲಿಕ ಫಲಿತಾಂಶಕ್ಕೆ ಸ್ವೀಕೃತವಾದ ಆಕ್ಷೇಪಣೆಗಳನ್ನು ಪರಿಶೀಲಿಸಿ ದಿನಾಂಕ 17.09.2026 ರಂದು ಜಿಲ್ಲಾ/ಘಟಕವಾರು ತಾತ್ಕಾಲಿಕ ಅಂಕಪಟ್ಟಿಯನ್ನು ಪ್ರಕಟಿಸಲಾಗಿದ್ದು, ಅಧಿಸೂಚನೆಯಲ್ಲಿ ತಿಳಿಸಿರುವಂತೆ ಶೂನ್ಯ ಹಾಗೂ ಶೂನ್ಯಕ್ಕಿಂತ ಕಡಿಮೆ ಅಂಕಗಳನ್ನು ಪಡೆದ ಅಭ್ಯರ್ಥಿಗಳನ್ನು ಹೊರತುಪಡಿಸಿದ ಅಭ್ಯರ್ಥಿಗಳ ಅಂತಿಮ ಅಂಕಪಟ್ಟಿಯನ್ನು ದಿನಾಂಕ 19.09.2026 ರಂದು ಪ್ರಕಟಿಸಿ ಪೊಲೀಸ್ ಇಲಾಖೆಗೆ ಸದರಿ ಅಂತಿಮ ಅಂಕಪಟ್ಟಿಯನ್ನು ಹಸ್ತಾಂತರಿಸಲಾಗುವುದು ಹಾಗೂ ನೇಮಕಾತಿ ಪ್ರಾಧಿಕಾರದಿಂದ ಜಿಲ್ಲಾ/ನಗರ/ಘಟಕವಾರು 1:5 ಪಟ್ಟಿಯನ್ನು ಪ್ರಕಟಿಸಿ ದೇಹದಾರ್ಢ್ಯತೆ ಮತ್ತು ಸಹಿಷ್ಣುತೆ ಪರೀಕ್ಷೆಯನ್ನು ನಡೆಸಲು ಹಾಗೂ ನಿಯಮಾನುಸಾರ ಆಯ್ಕೆ ಪಟ್ಟಿ ಪ್ರಕಟಿಸಲು ಕ್ರಮವಹಿಸುವರು.

ಕಾರ್ಯನಿರ್ವಾಹಕ ನಿರ್ದೇಶಕರು

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in